ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ತವಗ ಗ್ರಾಮಾದಲ್ಲಿರುವ ನೀರಾವರಿ ಇಲಾಖೆಯ ನಿರೀಕ್ಷಣಾ ಮಂದಿರದ ಕಟ್ಟಡದಲ್ಲಿ ಮಂಜೂರಾಗಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಬೇಕಾಗಿದ್ದು ಆರೋಗ್ಯ ಇಲಾಖೆಗೆ ನೀರಾವರಿ ಇಲಾಖೆಯಿಂದ ಸದರೀ ಕಟ್ಟಡಗಳ ವರ್ಗಾವಣೆ ಇನ್ನೂ ಆಗಬೇಕಾಗಿದೆ.

ಆ) ಕಟ್ಟಡಗಳು ಆರೋಗ್ಯ ಇಲಾಖೆಯ ಅಧೀನಕ್ಕೆ ಬಂದ ನಂತರ ವೈದ್ಯರನ್ನು ನೇಮಿಸಲಾಗುವುದು.

ಇ) ಹೌದು.

ಬೆಂಗಳೂರು ನಗರದ ನರ್ಸಿಂಗ್ ಹೋಂಗಳಲ್ಲಿ ಬಡಜನರಿಗೆ ಉಚಿತ ವೈದ್ಯಕೀಯ ಚಿಕಿತ್ಸೆ.

2162 - ಶ್ರೀಮತಿ ಡಿ.ಜಿ. ಹೇಮಾವತಿ (ಶಾಂತಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಬೆಂಗಳೂರು ನಗರದಲ್ಲಿರುವ ನರ್ಸಿಂಗ್ ಹೋಂಗಳ ಒಟ್ಟು ಸಂಖ್ಯೆ?

2) ಇವುಗಳಲ್ಲಿ ಶಾಂತಿನಗರ ವಿಧಾನಸಭಾ ಕ್ಷೇತ್ರದಲ್ಲಿ ಬರುವ ನರ್ಸಿಂಗ್ ಹೋಂಗಳ ಸಂಖ್ಯೆ ಎಷ್ಟು?

3) ಈ ನರ್ಸಿಂಗ್ ಹೋಂಗಳಲ್ಲಿ ಬಡ ಜನರಿಗೆ ವಾರದಲ್ಲಿ ಒಂದು ದಿನದ ಮಟ್ಟಿಗಾದರೂ ಉಚಿತ ವೈದ್ಯಕೀಯ ಚಿಕಿತ್ಸೆ ನೀಡುವ ಪ್ರಸ್ತಾವನೆ ಏನಾದರೂ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬೆಂಗಳೂರು ನಗರದಲ್ಲಿ ಒಟ್ಟು 188 ನರ್ಸಿಂಗ್ ಹೋಂಗಳಿವೆ.

ಆ) 17

ಇ) ಖಾಸಗಿ ನರ್ಸಿಂಗ್ ಹೋಂಗಳ ನಿಯಂತ್ರಣಕ್ಕೆ ಶಾಸನ ಒಂದನ್ನು ತರುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಕುಂದಾಪುರ ಸಾರ್ವಜನಿಕ ಆಸ್ಪತ್ರೆ ಅಭಿವೃದ್ಧಿ

2163 - ಶ್ರೀ ಐ.ಎಂ. ಜಯರಾಮ ಶೆಟ್ಟಿ (ಬೈಂದೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

1) ವಿಶ್ವಬ್ಯಾಂಕ್ ಯೋಜನೆಯಡಿಯಲ್ಲಿ ಕುಂದಾಪುರ ಸಾರ್ವಜನಿಕ ಆಸ್ಪತ್ರೆಯನ್ನು ಉನ್ನತೀಕರಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?